## ಕರ್ನಾಟಕ ಸರ್ಕಾರ

**ಸಂಖ್ಯೆ:** ಹಿಂವಕ 160 ಬಿಸಿಎ 2022

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 18/10/2022.

19/X/2022

### "ಸುತ್ತೋಲೆ"

**ವಿಷಯ:** ನದಾಫ್/ಪಿಂಜಾರ ಜಾತಿಗಳಿಗೆ ಜಾತಿ ಮತು ಆದಾಯ ಪ್ರಮಾಣಪತ್ರ ಹಾಗೂ ಸಿಂಧುತ್ವ ಪ್ರಮಾಣ ಪತ್ರಗಳನ್ನು ನೀಡುವ ಕುರಿತು.

******

ನದಾಫ್/ಪಿಂಜಾರ ಸಮುದಾಯದವರಿಗೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ವಿತರಿಸುವಲ್ಲಿ ಉಂಟಾಗುತ್ತಿರುವ ಸಮಸ್ಯೆಗಳ ಕುರಿತು ಹಲವಾರು ಮನವಿಗಳು ಸರ್ಕಾರದಲ್ಲಿ ಸ್ವೀಕೃತವಾಗುತ್ತಿವೆ. ಸರ್ಕಾರದ ಸುತ್ತೋಲೆ ಸಂ:ಸಕಇ 119 ಬಿಸಿಎ 95 ದಿನಾಂಕ:06.03.1996ರಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ/ಸಿಂಧುತ್ವ ಪ್ರಮಾಣ ಪತ್ರಗಳ ಕುರಿತು ನಿರ್ದೇಶನ ನೀಡಿದ್ದಾಗ್ಯೂ ಅದರಂತೆ ಕ್ರಮವಹಿಸದೇ ಸಮಸ್ಯೆ ಮುಂದುವರೆದಿರುತ್ತದೆ.

ಶಾಲಾ ದಾಖಲಾತಿಗಳಲ್ಲಿ ಅರ್ಜಿದಾರರ ದಾಖಲಾತಿ ಬಗ್ಗೆ ಏನೇ ನಮೂದಿಸಿದ್ದರೂ ಸಹ, ಅದೊಂದನ್ನೆ ಆಧಾರವಾಗಿಟ್ಟುಕೊಳ್ಳದೇ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000, ದಿನಾಂಕ:30.03.2002ರಲ್ಲಿ ಪ್ರವರ್ಗ-1 ರ ಕ್ರ.ಸಂ: 94(ಎ) ನಲ್ಲಿ ಪಿಂಜಾರ ಹಾಗೂ 94(ಸಿ)ನಲ್ಲಿ ನದಾಫ್ ಜಾತಿಗಳಿಗೆ ಅರ್ಜಿದಾರರು ಸೇರಿರುವರೇ ಎಂಬ ಬಗ್ಗೆ 'ಕರ್ನಾಟಕ ಅನುಸೂಚಿ ಜಾತಿಗಳು, ಅನುಸೂಚಿ ಬುಡಕಟ್ಟುಗಳು ಮತ್ತು ಇತರೆ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) ಅಧಿನಿಯಮ-1990 ಮತ್ತು ನಿಯಮಗಳು–1992ರನ್ವಯ ಹಾಗೂ ಅಧಿಸೂಚನೆ ಸಂಖ್ಯೆ:ಎಸ್‌ಡಬ್ಲ್ಯೂಡಿ 132 ಎಸ್‌ಎಡಿ 97 ದಿನಾಂಕ:08.02.2000ರಲ್ಲಿ ತಿದ್ದುಪಡಿ ಮಾಡಿರುವ ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರೆ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳು ಮೀಸಲಾತಿ)(ತಿದ್ದುಪಡಿ)ನಿಯಮಗಳು 2000ರಲ್ಲಿ ನಿರ್ದಿಷ್ಟಪಡಿಸಿರುವ ವಿಧಿ ವಿಧಾನಗಳ ರೀತ್ಯಾ, ಪೂರಕ ದಾಖಲೆಗಳನ್ನು ಪರಿಶೀಲಿಸಿಕೊಂಡು, ಅವಶ್ಯಕತೆ ಇದ್ದಲ್ಲಿ ಸ್ಥಳೀಯವಾಗಿ ವಿಚಾರಣೆ ಜರುಗಿಸಿ ಅರ್ಜಿದಾರರ ಜಾತಿಯ ಬಗ್ಗೆ ದೃಢಪಡಿಸಿಕೊಂಡು ಜಾತಿ ಹಾಗೂ ಆದಾಯ ಪ್ರಮಾಣ ಪತ್ರವನ್ನು ವಿತರಿಸಲು ಸೂಕ್ತ ಕ್ರಮಕೈಗೊಳ್ಳುವಂತೆ ಸೂಚಿಸಲಾಗಿದೆ.

V. Akkamahadevi 18/10/22
(ವಿ. ಅಕ್ಕಮಹಾದೇವಿ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

2. ಆಯುಕ್ತರು, ಭೂಮಾಪನ ಮತ್ತು ಭೂ ದಾಖಲೆಗಳ ಆಯುಕ್ತಾಲಯ, ಕೆ.ಆರ್.ಸರ್ಕಲ್, ಬೆಂಗಳೂರು.
3. ಎಲ್ಲಾ ಪ್ರಾದೇಶಿಕ ಆಯುಕ್ತರುಗಳು,
4. ಎಲ್ಲಾ ಜಿಲ್ಲಾಧಿಕಾರಿಗಳು. (ಆಯುಕ್ತರ ಮುಖಾಂತರ)
5. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಸಂತ ನಗರ, ಬೆಂಗಳೂರು
6. ಎಲ್ಲಾ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.( ಆಯುಕ್ತರ ಮುಖಾಂತರ)
7. ಎಲ್ಲಾ ತಾಲ್ಲೂಕಿನ ತಹಶೀಲ್ದಾರರು, ( ಆಯುಕ್ತರ ಮುಖಾಂತರ)
8. ಶಾಖಾ ರಕ್ಷ ಕಡತ

**ಪ್ರತಿ:**

1. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.
2. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ
3. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು